# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 109 (08) |
| ಸದಸ್ಯರ ಹೆಸರು | : | ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 09/12/2024. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು . |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ಶಾಲಾ ಕಾಲೇಜುಗಳಿಗೆ ಖಾಯಂ ಮಾನ್ಯತೆಯಿದ್ದರೂ ಪ್ರತಿ ವರ್ಷ ನವೀಕರಣ ಮಾಡುವ ಪದ್ಧತಿ ಜಾರಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಪ್ರತಿ ವರ್ಷ ನವೀಕರಣ ಮಾಡಿಕೊಳ್ಳುವುದಕ್ಕೆ ಕಾರಣವೇನು; | ಬಂದಿದೆ.<br>ಸರ್ಕಾರದ ಅಧಿಸೂಚನೆ ಸಂಖ್ಯೆ:ಇಪಿ 65 ಪಿಜಿಸಿ 2024, ದಿನಾಂಕ: 26.08.2024ರನ್ವಯ ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್-36 ಮತ್ತು 39ರ ನಿಬಂಧನೆ / ಮಾನದಂಡಗಳಿಗೆ ಒಳಪಟ್ಟು ಮೊದಲ ಬಾರಿಗೆ ನವೀಕರಣವನ್ನು 10 ವರ್ಷಗಳ ಅವಧಿಗೆ ನೀಡಲು ಮತ್ತು ಮುಂದಿನ ಬಾರಿ ಶಾಶ್ವತವಾಗಿ ಮಾನ್ಯತೆಯನ್ನು ನವೀಕರಿಸಲು ಅವಕಾಶ ಮಾಡಿಕೊಡಲಾಗಿರುತ್ತದೆ. |
| ಆ) | ಹಾಜರಾತಿ ಕೊರತೆಯಿರುವ ಅನುದಾನಿತ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | • ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಕೊರತೆಯಿಂದ ಶೂನ್ಯ ಶಾಲೆಗಳಾದ ಸಂದರ್ಭದಲ್ಲಿ, ಸದರಿ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರನ್ನು ತಾತ್ಕಾಲಿಕವಾಗಿ ವರ್ಕಿಂಗ್ ಅರೆಂಜ್ ಮೆಂಟ್ ಮಾಡಲು ಜಿಲ್ಲಾ ಉಪನಿರ್ದೇಶಕರಿಗೆ ಸೂಚಿಸಲಾಗಿರುತ್ತದೆ.<br>• ಸದರಿ ಶಿಕ್ಷಕರನ್ನು ಇತರೆ ಆಡಳಿತ ಮಂಡಳಿಯ ವತಿಯಿಂದ ನಡೆಯುತ್ತಿರುವ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಅನುದಾನಿತ ಹುದ್ದೆಗಳಿಗೆ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಿದ್ದಲ್ಲಿ ಸದರಿ ಶಿಕ್ಷಕರ ಸ್ಥಳ ನಿಯುಕ್ತಿಯನ್ನು ಅನುಮೋದಿಸಲಾಗುತ್ತಿದೆ. |
| ಇ) | ಕನಿಷ್ಠ ಹಾಜರಾತಿಯಿರುವ ಅನುದಾನಿತ ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ವೇತನ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ.<br>ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಮಕ್ಕಳ ದಾಖಲಾತಿ ಕೊರತೆಯಿಂದ ಶೂನ್ಯ ಶಾಲೆಗಳಾದ ಸಂದರ್ಭದಲ್ಲಿ, ಸದರಿ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರನ್ನು ಉಪ ನಿರ್ದೇಶಕರ ಕಚೇರಿ ಹಂತದಿಂದ ತಾತ್ಕಾಲಿಕವಾಗಿ ವರ್ಕಿಂಗ್ ಅರೆಂಜ್‌ಮೆಂಟ್ ಮಾಡಿ ವೇತನವನ್ನು ನೀಡಲಾಗುತ್ತಿದೆ. |

| | | |
|---|---|---|
| ಈ) | ವಿದ್ಯಾರ್ಥಿಗಳ ಕೊರತೆಯಿಂದ ಅನುದಾನಿತ ಶಾಲೆಗಳನ್ನು ಮುಚ್ಚುವ ಸ್ಥಿತಿ ಬಂದರೆ ಕಾರ್ಯ ನಿರ್ವಹಿಸುವ ಶಿಕ್ಷಕರನ್ನು ಸರ್ಕಾರಿ ಶಾಲೆಗಳಿಗೆ ನಿಯೋಜನೆ ಮಾಡುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ? | ಇಲ್ಲ |

ಸಂಖ್ಯೆ: ಇಪಿ 389 ಪಿಜಿಸಿ 2024

**(ಎಸ್.ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು